# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ನೇ ಸಾಲಿನಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ: 2225-03-001-0-05-ಆಬ್ಜೆಕ್ಟೀವ್ ಕೋಡ್-(103) ರಡಿ ಹೆಚ್ಚುವರಿಯಾಗಿ ಒದಗಿಸಿರುವ ಅನುದಾನ ರೂ.130.00 ಕೋಟಿಗಳನ್ನು ಬಿಡುಗಡೆ ಮಾಡುವ ಬಗ್ಗೆ..

**ಓದಲಾಗಿದೆ:-**

1. 2021-22 ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳ ಸಂಪುಟ-5.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸ-5/ಸಿಆರ್-27/2021-22, ದಿನಾಂಕ 25.03.2022.
3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: FD 830 BRS 2021 ದಿನಾಂಕ:29.03.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 2021-22ನೇ ಸಾಲಿನ ಅಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮಕ್ಕೆ ರೂ.65.00ಕೋಟಿಗಳ ಅನುದಾನವನ್ನು ಹಾಗೂ ಪೂರಕ ಅಂದಾಜು-1 ಮತ್ತು 2 ರಲ್ಲಿ ಕ್ರಮವಾಗಿ ರೂ.5.00ಕೋಟಿ ಹಾಗೂ ರೂ.6.00ಕೋಟಿಗಳ ಅನುದಾನವನ್ನು ಹಂಚಿಕೆ ಮಾಡಿದ್ದು, ಸದರಿ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಪೂರ್ಣವಾಗಿ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಈ ಹಿಂದೆ ಮಂಜೂರು ಮಾಡಲಾಗಿದ್ದ ಸಂಘ-ಸಂಸ್ಥೆಗಳಲ್ಲಿ ಮೊದಲನೇ ಕಂತಿನ ಅನುದಾನವನ್ನು ಬಳಕೆ ಮಾಡಿ ಕಾಮಗಾರಿ ಪ್ರಗತಿ ವರದಿಯೊಂದಿಗೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿರುವ 438 ಸಂಘ-ಸಂಸ್ಥೆಗಳಿಗೆ ಎರಡನೇ ಕಂತಿನ ಅನುದಾನವನ್ನಾಗಿ ರೂ.8676.33ಲಕ್ಷಗಳನ್ನು, ಎರಡನೇ ಕಂತಿನ ಅನುದಾನವನ್ನು ಬಳಕೆ ಮಾಡಿ ಕಾಮಗಾರಿ ಪ್ರಗತಿ ವರದಿಯೊಂದಿಗೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿರುವ 257 ಸಂಘ-ಸಂಸ್ಥೆಗಳಿಗೆ ಮೂರನೇ ಕಂತಿನ ಅನುದಾನವನ್ನಾಗಿ ರೂ.1389.12 ಲಕ್ಷಗಳನ್ನು ಹಾಗೂ ಹೊಸದಾಗಿ ಮಂಜೂರಾಗಿರುವ 202 ಸಂಘ-ಸಂಸ್ಥೆಗಳಲ್ಲಿ ಪ್ರಸ್ತಾವನೆ ಸಲ್ಲಿಸಿರುವ 61 ಸಂಘ-ಸಂಸ್ಥೆಗಳಿಗೆ ಶೇಕಡ 25% ರಷ್ಟು ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡಲು ರೂ.931.25 ಲಕ್ಷಗಳ ಅವಶ್ಯಕತೆ ಇರುತ್ತದೆ. ಹೀಗೆ ಒಟ್ಟು ರೂ.10996.70 ಲಕ್ಷಗಳನ್ನು 756 ಸಂಘ-ಸಂಸ್ಥೆಗಳಿಗೆ ಬಿಡುಗಡೆ ಮಾಡಬೇಕಾಗಿರುತ್ತದೆ ಎಂದು ತಿಳಿಸಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆರ್ಥಿಕ ಇಲಾಖೆಯು 2021-22ನೇ ಸಾಲಿಗೆ ವಿವಿಧ ಹಿಂದುಳಿದ ವರ್ಗಗಳ ಸಂಘ/ಸಂಸ್ಥೆಗಳ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ನಿರ್ಮಾಣಕ್ಕೆ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ:2225-03-001-0-05-ಆಬ್ಜೆಕ್ಟೀವ್‌ಕೋಡ್-(103)ರಡಿ ರೂ.130.00ಕೋಟಿಗಳ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಿ ಆದೇಶಿಸಿರುತ್ತಾರೆ.

29/03/22

--2

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 339 ಬಿಎಂಎಸ್ 2021**
**ಬೆಂಗಳೂರು, ದಿನಾಂಕ:29.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿಗೆ ವಿವಿಧ ಹಿಂದುಳಿದ ವರ್ಗಗಳ ಸಂಘ/ಸಂಸ್ಥೆಗಳ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ನಿರ್ಮಾಣಕ್ಕೆ ಅನುದಾನ ಸಲುವಾಗಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮಕ್ಕಾಗಿ ಲೆಕ್ಕಶೀರ್ಷಿಕೆ:2225-03-001-0-05-ಆಬ್ಜೆಕ್ಟೀವ್‌ಕೋಡ್-(103)ರಡಿ ಒದಗಿಸಿರುವ ರೂ.130.00 ಕೋಟಿಗಳನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

**<u>ಷರತ್ತುಗಳು:</u>**

1. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಯೋಜನೆಯ ಮಾರ್ಗಸೂಚಿಗಳಂತೆ ನಿಯಮಾನುಸಾರ ಸಕ್ಷಮ ಪ್ರಾಧಿಕಾರವು ಸಲ್ಲಿಸಿರುವ ಹಣಬಳಕೆ ಪ್ರಮಾಣ ಪತ್ರವನ್ನು ಪರಿಶೀಲಿಸಿ 2 ಮತ್ತು 3 ನೇ ಕಂತಿನ ಅನುದಾನ ಬಿಡುಗಡೆಗೆ ಹಾಗೂ ಸಕ್ಷಮ ಪ್ರಾಧಿಕಾರದಿಂದ ಮೊದಲನೇ ಕಂತಿನ ಅನುದಾನಕ್ಕೆ ನಿಯಮಾನುಸಾರ ಬೇಡಿಕೆ ಬಂದಿರುವ ಪ್ರಸ್ತಾವನೆಗಳಿಗೆ ಜೇಷ್ಠತೆಯ ಅನುಸಾರ, ಅರ್ಹತೆಯನುಸಾರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014 ಮತ್ತು ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017 ರನ್ವಯ ಅನುದಾನ ಬಿಡುಗಡೆ ಮಾಡತಕ್ಕದ್ದು.

2. ಸಕ್ಷಮ ಪ್ರಾಧಿಕಾರದಿಂದ ಬಂದಿರುವ ಮೇಲಿನಂತೆ ಪ್ರಸ್ತಾವನೆಗಳಿಗೆ ಜೇಷ್ಠತೆಯನ್ನು ಹೊರತುಪಡಿಸಿ ಅನುದಾನವನ್ನು ಬಿಡುಗಡೆಗೊಳಿಸತಕ್ಕದ್ದಲ್ಲ. ಒಂದು ವೇಳೆ ಜೇಷ್ಠತೆಯನ್ನು ಹೊರತುಪಡಿಸಿ ಅನುದಾನ ಬಿಡುಗಡೆ ಮಾಡಿದ ಪಕ್ಷದಲ್ಲಿ ಹಾಗೂ ಸಂಘ/ಸಂಸ್ಥೆಗಳಿಂದ ದೂರುಗಳು ಸರ್ಕಾರದಲ್ಲಿ ಸ್ವೀಕೃತಗೊಂಡಲ್ಲಿ ಸಂಬಂಧಪಟ್ಟ ಪ್ರಾಧಿಕಾರ/ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗುವುದು.

3. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿದೆಯೋ, ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.

4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ನಿಯಮಾನುಸಾರ ಸದ್ಬಳಕೆ ಮಾಡಿರುವ ಬಗ್ಗೆ ಎಲ್ಲಾ ರೀತಿಯ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.

5. ಅನುದಾನ ಬಿಡುಗಡೆ ಮತ್ತು ಬಳಕೆಗೆ ಸಂಬಂಧಿಸಿದಂತೆ ಕಾಮಗಾರಿವಾರು/ ತಾಲ್ಲೂಕುವಾರು /ಜಿಲ್ಲಾವಾರು ವಿವರಗಳನ್ನು ಆಯುಕ್ತಾಲಯದ ಜಾಲತಾಣದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

ಶ್ರೀ. 29/03/22

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: FD 830 BRS 2021 ದಿನಾಂಕ:29.03.2022 ರನ್ವಯ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ /ಕಾರ್ಯದರ್ಶಿ ಇವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 29/03/2022

**(ಷಾಹೀನ್ ಪರ್ವೀನ್ .ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3&9), ವಿಧಾನಸೌಧ, ಬೆಂಗಳೂರು.
4. ಖಜನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ ಇಲಾಖೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು,ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು,ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ 1 & 2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ-1, (ಸಮನ್ವಯ), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಇಲಾಖಾ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲು ಕ್ರಮವಹಿಸುವುದು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.